**OCTOBER 12, 2024**
**ALL INDIA RADIO- DHARWAD**
**PRADESH SAMACHARA (KANNADA) 7:05 AM**

**ನಾಡಿನ ಸಮಸ್ತ ಜನತೆಗೆ ವಿಜಯದಶಮಿ ಶುಭಾಶಯಗಳು**

**ಮುಖ್ಯಾಂಶಗಳು**

- **ಆರೋಗ್ಯಕರ ಚರ್ಚೆ, ಟೀಕೆಗಳು ಪ್ರಜಾಪ್ರಭುತ್ವ ಯಶಸ್ವಿಗೆ ಕಾರಣ– ಮುಖ್ಯಮಂತ್ರಿ ಸಿದ್ದರಾಮಯ್ಯ.**

- **ಸಂಭ್ರಮದ ನಾಡಹಬ್ಬ ದಸರಾ ಆಚರಣೆಗೆ ರಾಜ್ಯಾದ್ಯಂತ ಸಿದ್ಧತೆ: ವಿಜಯದಶಮಿಯ ಜಂಬೂ ಸವಾರಿಗೆ ಅಂಬಾವಿಲಾಸ ಅರಮನೆ ಸಜ್ಜು.**

- **ಮಧ್ಯಮ ಮತ್ತು ಸಣ್ಣ ಕೈಗಾರಿಕೆ ಮುಖಾಂತರ ತಯಾರಿಸುವ ಶೇಕಡಾ 25 ರಷ್ಟು ಉತ್ಪಾದನೆಗಳನ್ನು ಸರ್ಕಾರ ಖರೀದಿಸಲಿದೆ–ಕೇಂದ್ರ ಸಚಿವೆ ಶೋಭಾ ಕರಂದ್ಲಾಜೆ.**

- **ಇದೇ 23 ರಿಂದ 3 ದಿನಗಳ ಕಾಲ ಕಿತ್ತೂರು ಉತ್ಸವ: ಸಕಲ ಸಿದ್ಧತೆ– ಜಿಲ್ಲಾಧಿಕಾರಿ ಮೊಹಮ್ಮದ್ ರೋಷನ್.**

**ಈಗ ವಾರ್ತೆಗಳ ವಿವರ**

*******

**ಆರೋಗ್ಯಕರ ಚರ್ಚೆ, ಟೀಕೆಗಳು ನಡೆದಾಗ ಮಾತ್ರ ಪ್ರಜಾಪ್ರಭುತ್ವ ಯಶಸ್ವಿಯಾಗುತ್ತದೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಅಭಿಪ್ರಾಯಪಟ್ಟಿದ್ದಾರೆ. ಮೈಸೂರಿನಲ್ಲಿ ನಿನ್ನೆ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಪ್ರಜಾಪ್ರಭುತ್ವದಲ್ಲಿ ಎಲ್ಲರೂ ಎಲ್ಲದಕ್ಕೂ ಸಹಮತ ವ್ಯಕ್ತಪಡಿಸಬೇಕಿಲ್ಲ. ಅಭಿಪ್ರಾಯಬೇಧಗಳು ಸಹಜ. ಆದರೆ ಟೀಕೆಗಳು ಆರೋಗ್ಯಕರವಾಗಿರಬೇಕು ಎಂದರು. ಕೆಲವು ಮೊಕದ್ದಮೆಗಳ ಬಗ್ಗೆ ಉಪಸಮಿತಿಯ ವಿವೇಚನೆಯಂತೆ ಹುಬ್ಬಳ್ಳಿ ಗಲಭೆ ಪ್ರಕರಣದ ದೂರನ್ನು ಹಿಂದಕ್ಕೆ ಪಡೆಯಲಾಗಿದೆ ಎಂದು ಮುಖ್ಯಮಂತ್ರಿ ಸ್ಪಷ್ಟಪಡಿಸಿದರು.**

*******

**ಬರುವ ತಿಂಗಳು ನವೆಂಬರ್ ಒಂದಕ್ಕೆ ಕನ್ನಡ ರಾಜ್ಯೋತ್ಸವವನ್ನು ಅದ್ದೂರಿಯಾಗಿ ಆಚರಿಸಲು ಸರ್ಕಾರ ನಿರ್ಧರಿಸಿದ್ದು, ಈ ನಿಟ್ಟಿನಲ್ಲಿ ಕಾರ್ಖಾನೆಗಳು, ಐಟಿಬಿಟಿ ಕಚೇರಿಗಳಲ್ಲಿ ಕನ್ನಡ ಬಾವುಟ ಹಾರಿಸುವುದು ಕಡ್ಡಾಯ ಎಂದು ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಹೇಳಿದ್ದಾರೆ.**

ಬೆಂಗಳೂರಿನಲ್ಲಿ ನಿನ್ನೆ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ನವೆಂಬರ್ ಒಂದರಂದು ಕಡ್ಡಾಯವಾಗಿ ಕನ್ನಡ ರಾಜ್ಯೋತ್ಸವ ಆಚರಿಸಬೇಕು. ಅಂದು ಎಲ್ಲ ಶಾಲಾ–ಕಾಲೇಜುಗಳು, ಕಾರ್ಖಾನೆಗಳು ಮತ್ತು ಐಟಿಬಿಟಿ ಕಚೇರಿಗಳಲ್ಲಿ ಕಡ್ಡಾಯವಾಗಿ ಕನ್ನಡ ಬಾವುಟ ಹಾರಿಸುವಂತೆ ಸೂಚನೆ ನೀಡಲಾಗಿದೆ ಎಂದು ಅವರು ಹೇಳಿದರು.

*******

ಇಂದು ನಾಡಹಬ್ಬ ದಸರಾ ಮಹೋತ್ಸವದ ಕೊನೆಯ ದಿನ. ನಾಡಿನಾದ್ಯಂತ ದಸರಾ ಹಬ್ಬವನ್ನು ಶ್ರದ್ಧೆ, ಸಡಗರ, ಸಂಭ್ರಮದಿಂದ ಆಚರಿಸಲಾಗುತ್ತಿದೆ. ಮೈಸೂರು ದಸರಾ 2024 ರ ಮಹೋತ್ಸವದಲ್ಲಿ ವಿಜಯದಶಮಿಯ ಜಂಬೂ ಸವಾರಿಗೆ ಅಂಬಾವಿಲಾಸ ಅರಮನೆ ಸಜ್ಜಾಗಿದ್ದು, ಅರಮನೆ ಅಂಗಳದಲ್ಲಿ 40 ಸಾವಿರ ಆಸನಗಳ ವ್ಯವಸ್ಥೆ ಮಾಡಲಾಗಿದೆ. ಇಂದು ಬೆಳಗ್ಗೆ 8 ಗಂಟೆಗೆ ಚಾಮುಂಡಿಬೆಟ್ಟದಿಂದ ಮೆರವಣಿಗೆ ಮೂಲಕ ಉತ್ಸವ ಮೂರ್ತಿ ಅಂಬಾವಿಲಾಸ ಅರಮನೆ ತಲುಪುತ್ತದೆ. ಬೆಳಗ್ಗೆ 10:15ಕ್ಕೆ ಅರಮನೆ ಆವರಣದಲ್ಲಿ ನಡೆಯುವ ಉತ್ತರ ಪೂಜೆಗೆ ಪಟ್ಟದ ಆನೆ, ಪಟ್ಟದ ಹಸು, ಪಟ್ಟದ ಕುದುರೆ ಆಗಮಿಸಲಿವೆ. ಇನ್ನೊಂದೆಡೆ 10 ಗಂಟೆಗೆ ಅರಮನೆಯ ಶ್ವೇತವರಹ ದೇವಸ್ಥಾನದಲ್ಲಿ ಚೆಟ್ಟಿಕಾಳಗ ನಡೆಯಲಿದೆ. ನಂತರ 11:20 ರಿಂದ 11:45 ರವರಗೆ ಅರಮನೆ ಅಂಗಳದ ಭುವನೇಶ್ವರಿ ದೇವಸ್ಥಾನಕ್ಕೆ ರಾಜವಂಶಸ್ಥ ಯದುವೀರ್ ಕೃ ್ಣದತ್ತ ಒಡೆಯರ ಆಗಮಿಸಿ, ಬನ್ನಿ ಪೂಜೆ ಸಲ್ಲಿಸಲಿದ್ದು, ಮದ್ಯಾಹ್ನ 1:41 ರಿಂದ 2:10 ರ ಶುಭ ಮಕರ ಲಗ್ನದಲ್ಲಿ ಅರಮನೆಯ ಬಲರಾಮ ದ್ವಾರದ ಕೋಟೆ ಆಂಜನೇಯ ದೇವಸ್ಥಾನದ ಮುಂಭಾಗದಲ್ಲಿ ನಂದಿಧ್ವಜ ಪೂಜೆ ನಡೆಯಲಿದ್ದು, ಬಳಿಕ ವಿಶ್ವವಿಖ್ಯಾತ ಜಂಬೂ ಸವಾರಿ ನಡೆಯಲಿದೆ. ನಂದಿ ಧ್ವಜ ಪೂಜೆಯನ್ನು ಮುಖ್ಯಮಂತ್ರಿ ಸಿದ್ದರಾಮಯ್ಯ, ಉಪ ಮುಖ್ಯಮಂತ್ರಿ ಡಿಕೆ ಶಿವಕುಮಾರ್ ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಡಾ.ಹೆಚ್.ಸಿ.ಮಹದೇವಪ್ಪ ಸೇರಿದಂತೆ ಇತರೆ ಜನಪ್ರತಿನಿಧಿಗಳು ಹಾಗೂ ಅಧಿಕಾರಿಗಳು ನೆರವೇರಿಸಲಿದ್ದಾರೆ. ಜಂಬೂಸವಾರಿಯಲ್ಲಿ ವಿವಿಧ ಜಿಲ್ಲೆ ಹಾಗೂ ವಿವಿಧ ಇಲಾಖೆಗಳಿಂದ ತಯಾರಿಸಲಾದ 49 ಸ್ಥಬ್ದ ಚಿತ್ರಗಳು ಪಾಲ್ಗೊಳ್ಳಲಿವೆ. ಸಂಜೆ ಮೈಸೂರಿನ ಬನ್ನಿಮಂಟಪ ಮೈದಾನದಲಿ 7 ಗಂಟೆಗೆ ಪ್ರಾರಂಭವಾಗುವ ಪಂಜಿನ ಕವಾಯತಿನಲ್ಲಿ ರಾಜ್ಯಪಾಲ ಥಾವರಚಂದ್ ಗೆಹಲೊಟ್ ಕವಾಯತ್ ವೀಕ್ಷಿಸಿ, ಗೌರವ ವಂದನೆ ಸ್ವೀಕರಿಸುವರು.

*******

ಮಹಾನವಮಿ ಅಂಗವಾಗಿ ನಿನ್ನೆ ನಾಡಿನ ವಿವಿಧೆಡೆ ಸಂಭ್ರಮದಿಂದ ಆಯಧ ಪೂಜೆ ನೆರವೇರಿಸಲಾಯಿತು. ಸಾರ್ವಜನಿಕರು ಮನೆಯಲ್ಲಿನ ಯಂತ್ರಗಳು, ವಾಹನಗಳು ಹಾಗೂ ವಿವಿಧ ವಾಣಿಜ್ಯ ಸಾಮಗ್ರಿಗಳಿಗೆ ಪೂಜೆ ಸಲ್ಲಿಸಿದರು. ಮೈಸೂರಿನ ಅಂಬಾ ವಿಲಾಸ ಅರಮನೆಯಲ್ಲಿ ನಿನ್ನೆ ಆಯುಧ ಪೂಜೆಯನ್ನು ವಿಶಿ ್ಟ ರೀತಿಯಲ್ಲಿ ಆಚರಿಸಲಾಯಿತು. ಶರನ್ನವರಾತ್ರಿಯ ಒಂಬತ್ತನೆ ದಿನವಾದ ನಿನ್ನೆ ಅರಮನೆಯ ಕಲ್ಯಾಣ ಮಂಟಪದಲ್ಲಿ ನಡೆದ ಆಯುಧ ಪೂಜೆಯಲ್ಲಿ ರಾಜವಂಶಸ್ಥ ಯಧುವೀರ್ ಕೃ ್ಣ ದತ್ತ ಚಾಮರಾಜ ಒಡೆಯರ್ ಸಂಪ್ರದಾಯಬದ್ದವಾಗಿ ಆಯುಧ ಪೂಜೆ ನೆರವೇರಿಸಿದರು. ಬೆಂಗಳೂರು ಗ್ರಾಮಾಂತರ ಜಿಲ್ಲೆಯಲ್ಲಿ ಆಯುಧ ಪೂಜೆಯನ್ನು ಸಡಗರ ಸಂಭ್ರಮದಿಂದ ಆಚರಿಸಲಾಯಿತು.

ನೇಕಾರಿಕೆಯೇ ಪ್ರಧಾನವಾಗಿರುವ ದೊಡ್ಡಬಳ್ಳಾಪುರದಲ್ಲಿ ಮಗ್ಗಗಳಿಗೆ ಹಾಗೂ ಮಗ್ಗದ ಪರಿಕರಗಳಿಗೆ ವಿಶೇ ಷವಾಗಿ ಪೂಜೆ ಸಲ್ಲಿಸಲಾಯಿತು. ವಾಣಿಜ್ಯ ನಗರಿ ದಾವಣಗೆರೆ ಜಿಲ್ಲೆಯಲ್ಲಿ ಆಯುಧಪೂಜೆ ಮತ್ತು ದಸರಾ ಮಹೋತ್ಸವದ ಸಂಭ್ರಮ ಮನೆಮಾಡಿದೆ. ಆಯುಧ ಪೂಜೆಯ ಭಾಗವಾಗಿ ನಿನ್ನೆ ಬೆಳಿಗ್ಗೆಯಿಂದಲೂ ಜನರು ವಾಹನಗಳನ್ನು ತೊಳೆದು ಹೂವು, ಬಾಳೆಕಂದುಗಳನ್ನು ಕಟ್ಟಿ ಪೂಜೆ ಸಲ್ಲಿಸಿದರು. ವರ್ತಕರು ಅಂಗಡಿ ಮುಂಗಟ್ಟುಗಳಿಗೆ ದೀಪಾಲಂಕರ ಮಾಡಿ ವಿಶೇಷ ಪೂಜೆ ಸಲ್ಲಿಸಿ, ಕಾರ್ಮಿಕರಿಗೆ ಸಿಹಿ ಹಂಚಿ, ಸಂಭ್ರಮಿಸಿದರು. ಕೋಲಾರ ಜಿಲ್ಲಾದ್ಯಂತ ಆಯುಧ ಪೂಜೆ ಹಾಗೂ ದಸರಾ ಹಬ್ಬವನ್ನು ಶ್ರದ್ಧಾ ಭಕ್ತಿ ಹಾಗೂ ಸಂಭ್ರಮದಿಂದ ಆಚರಿಸಲಾಗುತ್ತಿದೆ. ಆಯುಧ ಪೂಜೆ ಹಿನ್ನಲೆ ಜಿಲ್ಲೆಯ ಹಲವು ದೇವಸ್ಥಾನದಲ್ಲಿ ವಿಶೇ ಷ ಪೂಜಾ ಕೈಂಕರ್ಯಗಳು ನಡೆದವು. ದೇವಸ್ಥಾನಗಳಲ್ಲಿ ಭಕ್ತರು ಸರತಿ ಸಾಲುಗಳಲ್ಲಿ ನಿಂತು ದೇವರ ದರ್ಶನ ಪಡೆದರು.

*******

ಈಗ ಪ್ರಕಟಣೆ. ನಂತರ ಪ್ರದೇಶ ಸಮಾಚಾರ ಮುಂದುವರೆಯುವುದು.

ಪ್ರದೇಶ ಸಮಾಚಾರ ಕೇಳುತ್ತಿದ್ದೀರಿ

*******

ಮುಂದಿನ ದಿನಗಳಲ್ಲಿ ಕೇಂದ್ರ ಸರ್ಕಾರ ವಿತರಿಸುವ ಪಡಿತರ ಅಕ್ಕಿಗೆ ಶೇಕಡಾ 1 ರ ಷ್ಟ ಪೌಷ್ಟಿಕಾಂಶ ಸೇರಿಸಲಾಗುತ್ತದೆ ಎಂದು ಕೇಂದ್ರ ಆಹಾರ ಸಚಿವ ಪ್ರಲ್ಹಾದ್ ಜೋಶಿ ತಿಳಿಸಿದ್ದಾರೆ. ಹುಬ್ಬಳ್ಳಿಯಲ್ಲಿ ನಿನ್ನೆ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಗರೀಬ್ ಕಲ್ಯಾಣ ಮತ್ತು ಅಂತ್ಯೋದಯ ಅನ್ನ ಯೋಜನೆಯಡಿ ವಿತರಿಸುವ ಅಕ್ಕಿಗೆ ಪೌಷ್ಟಿಕಾಂಶ ಸೇರಿಸಿ ಸಾರವರ್ಧಿತ ಅಕ್ಕಿ ತಯಾರಿಸಿ, ವಿತರಣೆ ಮಾಡಲು ಕೇಂದ್ರ ಕ್ರಮ ಕೈಗೊಂಡಿದೆ ಎಂದರು. ರಕ್ತಹೀನತೆಯನ್ನು ಹೋಗಲಾಡಿಸಲು ಪೌಷ್ಟಿಕಾಂಶಯುಕ್ತ ಹಾಗೂ ಸಾರವರ್ಧಿತ ಅಕ್ಕಿ ವಿತರಣೆಗೆ ಕೇಂದ್ರ ಸರ್ಕಾರ ಮುಂದಾಗಿದೆ ಎಂದು ಸಚಿವರು ಹೇಳಿದರು.

*******

ದೇಶದಲ್ಲಿ ಮಧ್ಯಮ ಮತ್ತು ಸಣ್ಣ ಕೈಗಾರಿಕೆ ಮುಖಾಂತರ ತಯಾರಿಸುವ ಶೇಕಡಾ 25 ರಷ್ಟು ಉತ್ಪಾದನೆಗಳನ್ನು ಸರ್ಕಾರ ಖರೀದಿ ಮಾಡಲಿದೆ ಎಂದು ಕೇಂದ್ರ ಸಣ್ಣ ಕೈಗಾರಿಕೆ ಸಚಿವೆ ಶೋಭಾ ಕರಂದ್ಲಾಜೆ ತಿಳಿಸಿದ್ದಾರೆ. ಮೈಸೂರಿನಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಕೃಷಿಯ ನಂತರ ದೇಶದಲ್ಲಿ ಹೆಚ್ಚು ಉದ್ಯೋಗ ನೀಡುತ್ತಿರುವದು ಮಧ್ಯಮ ಮತ್ತು ಸಣ್ಣ ಕೈಗಾರಿಕಾ ವಲಯ. ಈ ವಲಯ 21 ಕೋಟಿ ಜನರಿಗೆ ಉದ್ಯೋಗ ನೀಡಿದ್ದು, ಗುಡಿ ಕೈಗಾರಿಕೆಗಳ ಮೂಲಕ ಮಹಾತ್ಮಾ ಗಾಂಧಿಜಿ ಅವರ ಕನಸನ್ನು ನನಸು ಮಾಡಲು ಸರ್ಕಾರ ಚಿಂತನೆ ನಡೆಸಿದೆ ಎಂದರು. ರಾಜ್ಯದ ಎಂಎಸ್ಎಂಇಗಳನ್ನು ಅಂತರರಾಷ್ಟ್ರೀಯ ಮಟ್ಟಕ್ಕೆ ಕೊಂಡೊಯ್ಯುವುದು ಸರ್ಕಾರದ ಉದ್ದೇಶ ಎಂದು ಅವರು ಹೇಳಿದರು.

*******

ಮೈಸೂರಿನ ಚಾಮುಂಡೇಶ್ವರಿ ಬೆಟ್ಟಕ್ಕೆ  ಕೇಂದ್ರ ಭಾರೀ ಕೈಗಾರಿಕಾ ಮತ್ತು ಉಕ್ಕು ಖಾತೆ ಸಚಿವ ಎಚ್.ಡಿ.ಕುಮಾರಸ್ವಾಮಿ ನಿನ್ನೆ ಭೇಟಿ ನೀಡಿ ಪೂಜೆ ಸಲ್ಲಿಸಿದರು. ಬಳಿಕ ಸುದ್ದಿಗಾರರೊಂದಿಗೆ ಮಾತನಾಡಿದ ಸಚಿವರು, ಕೋವಿಡ್ – 19 ಸಾಂಕ್ರಾಮಿಕ ರೋಗ ನಿರ್ವಹಣೆಯ ವೇಳೆ ನಡೆದಿರಬಹುದಾದ ಅವ್ಯವಹಾರಗಳ ತನಿಖೆಗಾಗಿ  ಎಸ್.ಐ.ಟಿ. ತನಿಖೆ ನಡೆಸಲು ರಾಜ್ಯ ಸರ್ಕಾರ ಮುಂದಾಗಿದೆ. ಕಾಂಗ್ರೆಸ್ ವಿರೋಧ ಪಕ್ಷದಲ್ಲಿದ್ದಾಗ ಮಾತನಾಡದೆ ಇದೀಗ ತನಿಖೆ ನಡೆಸಲು ಮುಂದಾಗಿದೆ.  ಸರ್ಕಾರ ತಾನು ಮಾಡಿರುವ ತಪ್ಪುಗಳನ್ನು ಮರೆಮಾಚಲು ಆಡಳಿತ ದುರುಪಯೋಗ ಪಡಿಸಿಕೊಳ್ಳುತ್ತಿದೆ ಎಂದರು.

*******

ವೀರರಾಣಿ ಕಿತ್ತೂರು ಚನ್ನಮ್ಮ ಬ್ರಿಟಿಷರ ವಿರುದ್ಧ ವಿಜಯ ಸಾಧಿಸಿದ ಐತಿಹಾಸಿಕ ಘಟನೆಗೆ ಇನ್ನೂರು ವರ್ಷ ಸಂದಿರುವ ಸಂದರ್ಭದಲ್ಲಿ ಇದೇ 23 ರಿಂದ 3 ದಿನಗಳ ಕಾಲ ಕಿತ್ತೂರು ಉತ್ಸವವನ್ನು ಸಂಭ್ರಮದಿಂದ ಆಚರಿಸಲಾಗುತ್ತಿದೆ. ಕಿತ್ತೂರು ಕೋಟೆ ಆವರಣದಲ್ಲಿ ನಡೆಯಲಿರುವ ಅದ್ದೂರಿ ಉತ್ಸವಕ್ಕೆ ಸಕಲ ಸಿದ್ಧತೆಗಳನ್ನು ಮಾಡಿಕೊಳ್ಳಲಾಗಿದೆ ಎಂದು ಬೆಳಗಾವಿ ಜಿಲ್ಲಾಧಿಕಾರಿ ಮೊಹ್ಮದ್ ರೋಷನ್ ತಿಳಿಸಿದ್ದಾರೆ. ಸುದ್ದಿಗಾರರೊಂದಿಗೆ ಮಾತನಾಡಿ ಈ ವಿಷಯ ತಿಳಿಸಿದ ಅವರು, ಈ ಬಾರಿ ಕಿತ್ತೂರು ಒಳಗೊಂಡಂತೆ ಚನ್ನಮ್ಮನ ಜನ್ಮಸ್ಥಳ ಬೆಳಗಾವಿಯ ಕಾಕತಿ ಗ್ರಾಮದಲ್ಲಿ ಹಾಗೂ ಬೆಳಗಾವಿ ನಗರದಲ್ಲೂ ಉತ್ಸವದ ನಿಮಿತ್ಯ ವಿಶೇಷ ಕಾರ್ಯಕ್ರಮಗಳನ್ನು ಆಯೋಜಿಸಲಾಗುತ್ತಿದೆ. ಎಂದು ತಿಳಿಸಿದರು.

*******

ಹಾವೇರಿ ಜಿಲ್ಲಾದ್ಯಂತ ಮಳೆ ಮುಂದುವರಿದಿದ್ದು, ಜನಜೀವನ ಅಸ್ತವ್ಯಸ್ತಗೊಂಡಿದೆ. ವರುಣನ ಆರ್ಭಟಕ್ಕೆ 47 ಮನೆಗಳಿಗೆ ಹಾನಿ ಸಂಭವಿಸಿದ್ದು, ಜಿಲ್ಲೆಯ ಸವಣೂರು ತಾಲೂಕಿನ ಕಳಸೂರು ಬಳಿ ಅಧಿಕ ಮಳೆಗೆ ವರದಾ ನದಿಗೆ ನಿರ್ಮಿಸಿರುವ ಬ್ರಿಡ್ಜ್ ಕಂ ಬ್ಯಾರೇಜ್ ಮುಳುಗಡೆಯಾಗಿದೆ. ತುಂಗಭದ್ರಾ, ವರದಾ, ಕುಮದ್ವತಿ ನದಿಗಳು ಹಾಗೂ ಹಳ್ಳಗಳಲ್ಲಿ ನೀರಿನ ಮಟ್ಟ ಏರಿಕೆಯಾಗಿದೆ. ಮಳೆಯಿಂದಾಗಿ ಕಟಾವಿಗೆ ಬಂದಿದ್ದ ಶೇಂಗಾ, ಸೋಯಾಬಿನ್, ಮೆಕ್ಕೆಜೋಳ, ಹತ್ತಿ ಸೇರಿದಂತೆ ವಿವಿಧ ಬೆಳೆಗಳಿಗೆ ಹಾನಿ ಸಂಬವಿಸಿದೆ. ಸ್ಥಳಕ್ಕೆ ಜಿಲ್ಲಾಧಿಕಾರಿ ವಿಜಯ ಮಹಾಂತೇಶ ದಾನಮ್ಮನವರ ಭೇಟಿ ನೀಡಿ ಪರಿಶೀಲಿಸಿದರು. ಗ್ಯಾಸ್ ಪೈಪ್‌ಲೈನ್ ಅಳವಡಿಕೆಗಾಗಿ ತೆಗೆದಿರುವ ಜಾಗದಲ್ಲಿ ಉಂಟಾಗಿರುವ ಗುಂಡಿಗಳನ್ನು ವೈಜ್ಞಾನಿಕವಾಗಿ ಮುಚ್ಚುವಂತೆ ಜಿಲ್ಲಾಧಿಕಾರಿ ಅಧಿಕಾರಿಗಳಿಗೆ ಸೂಚನೆ ನೀಡಿದರು.

*******

ಈಗ ಸಂಕ್ಷಿಪ್ತ ಸುದ್ದಿಗಳು

ಆಯುಧಪೂಜೆ ಮತ್ತು ವಿಜಯ ದಶಮಿ ಅಂಗವಾಗಿ ನಿನ್ನೆ ಚಿಕ್ಕಬಳ್ಳಾಪುರ ಜಿಲ್ಲೆ ಚಿಂತಾಮಣಿ ತಾಲ್ಲೂಕು ಪತಂಜಲಿ ಯೋಗ ಸಮಿತಿಯ ನೂರಾರು ಯೋಗ ಬಂಧುಗಳು ಚಿಂತಾಮಣಿ ನಗರದ ಚೌಡೇಶ್ವರಿ ಅಮ್ಮನವರ ದೇವಾಲಯದ ಆವರಣದಲ್ಲಿ ಸಾಮೂಹಿಕ ದುರ್ಗಾ ನಮಸ್ಕಾರ ಕಾರ್ಯಕ್ರಮ ನಡೆಸಿಕೊಟ್ಟರು.

ಉಪ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಮಡಿಕೇರಿ ನಗರದ ವಿವಿಧ ದೇವಾಲಯಗಳಿಗೆ ನಿನ್ನೆ ಭೇಟಿ ನೀಡಿ ವಿಶೇಷ ಪೂಜೆ ಸಲ್ಲಿಸಿದರು.

**ಕೊನೆಯಲ್ಲಿ ಮತ್ತೊಮ್ಮೆ ಮುಖ್ಯಾಂಶಗಳು**

ಆರೋಗ್ಯಕರ ಚರ್ಚೆ, ಟೀಕೆಗಳು ಪ್ರಜಾಪ್ರಭುತ್ವ ಯಶಸ್ವಿಗೆ ಕಾರಣ– ಮುಖ್ಯಮಂತ್ರಿ ಸಿದ್ದರಾಮಯ್ಯ.

ಸಂಭ್ರಮದ ನಾಡಹಬ್ಬ ದಸರಾ ಆಚರಣೆಗೆ ರಾಜ್ಯಾದ್ಯಂತ ಸಿದ್ಧತೆ: ವಿಜಯದಶಮಿಯ ಜಂಬೂ ಸವಾರಿಗೆ ಅಂಬಾವಿಲಾಸ ಅರಮನೆ ಸಜ್ಜು.

ಮಧ್ಯಮ ಮತ್ತು ಸಣ್ಣ ಕೈಗಾರಿಕೆ ಮುಖಾಂತರ ತಯಾರಿಸುವ ಶೇಕಡಾ 25 ರಷ್ಟು ಉತ್ಪಾದನೆಗಳನ್ನು ಸರ್ಕಾರ ಖರೀದಿಸಲಿದೆ– ಕೇಂದ್ರ ಸಚಿವೆ ಶೋಭಾ ಕರಂದ್ಲಾಜೆ.

ಇದೇ 23 ರಿಂದ 3 ದಿನಗಳ ಕಾಲ ಕಿತ್ತೂರು ಉತ್ಸವ: ಸಕಲ ಸಿದ್ಧತೆ– ಜಿಲ್ಲಾಧಿಕಾರಿ ಮೊಹಮ್ಮದ್ ರೋಷನ್.

ಇಲ್ಲಿಗೆ ಪ್ರದೇಶ ಸಮಾಚಾರ ಮುಕ್ತಾಯವಾಯಿತು
ನಮ್ಮ ಮುಂದಿನ ರಾಷ್ಟ್ರೀಯ ವಾರ್ತೆ ಈ ಬೆಳಗ್ಗೆ 7.35 ಕ್ಕೆ

********